ಈ) ಸೇತುವೆ ರಚನೆಯನ್ನು ಸೇತು ಬಂಧನ. ಹಳ್ಳಿ ಹೆದ್ದಾರಿ ಮುಂತಾದ ಕಾರ್ಯಕ್ರಮಗಳಲ್ಲಿ ಅಳವಡಿಸಿಕೊಂಡು ಅನುದಾನದ ಲಭ್ಯತೆಯನ್ನು ಆನುಸರಿಸಿ ಹಂತ ಹಂತವಾಗಿ ಕಾರ್ಯಗತಗೊಳಿಸಲಾಗುತ್ತಿದೆ.

ಸಂಬಾಪುರ ಗ್ರಾಮದ ಯುವಕ ಮಂಡಲದ ಕಟ್ಟಡ ಅಪೂರ್ಣವಾಗಿರುವುದು.

291 (1612) ಶ್ರೀ ಕೆ.ಎಚ್.ಕುರುಡಗಿ (ಮುಂಡರಗಿ) : ಮಾನ್ಯ ಯುವಜನ ಸೇವಾ ಕ್ರೀಡಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗದಗ ತಾಲ್ಲೂಕು ಸಂಬಾಪುರ ಗ್ರಾಮದಲ್ಲಿ ಯುವಕ ಮಂಡಲ ಕಟ್ಟಡವು ಅರ್ಧಕ್ಕೆ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಆ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿರುವುದು;

ಇ) ಮುಂಡರಗಿ ತಾಲ್ಲೂಕು ಡಂಬಳದಲ್ಲಿ ಯುವಕ ಮಂಡಲ ಅರ್ದಕ್ಕೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಆ ಬಗ್ಗೆ ಯಾವ ಕ್ರಮಕ್ಕೈಗೊಳ್ಳಲಾಗಿದೆ?

ಶ್ರೀ ಎಸ್. ರಮೇಶ್ (ಯುವಜನ ಸೇವಾ ಕ್ರೀಡಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು):

ಅ) ಹೌದು

ಆ) ಸರ್ಕಾರದಿಂದ ಬಿಡುಗಡೆ ಮಾಡಬೇಕಾದ ಹಣವನ್ನು ಈಗಾಗಲೇ ಬಿಡುಗಡೆ ಮಾಡಲಾಗಿದೆ. ಯುವಕ ಸಂಘದವರು ಕೂಡ ಸಕ್ರೀಯವಾಗಿ ಉಳಿಕೆ ಹಾಕಿ ಕಟ್ಟಡದ ನಿರ್ಮಾಣದ ಕಾರ್ಯವನ್ನು ಪೂರ್ಣಹಂತಕ್ಕೆ ತಂದಿರುತ್ತಾರೆ.

ಇ) ಕಟ್ಟಡ ನಿರ್ಮಾಣ ಇನ್ನೂ ಪ್ರಾರಂಭವಾಗಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಬೀದರ್ ನಗರವನ್ನು ಪ್ರವಾಸಿ ಕೇಂದ್ರವಾಗಿ ಅಭಿವೃದ್ಧಿ

292 (1908) ಶ್ರೀ ನಾರಾಯಣ ರಾವ್ ಮನಹಳ್ಳಿ (ಬೀದರ್) : ಮಾನ್ಯ ವಾರ್ತಾ. ಪ್ರವಾಸೋದ್ಯಮ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ನಗರವು ಒಂದು ಐತಿಹಾಸಿಕ ಮತ್ತು ಪ್ರವಾಸಿ ಸ್ಥಳವೆಂದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ ಈ ನಗರವನ್ನು ಪ್ರವಾಸಿ ಕೇಂದ್ರವನ್ನಾಗಿ ಅಭಿವೃದ್ಧಿ ಪಡಿಸುವ ಬಗ್ಗೆ ಸರ್ಕಾರದಲ್ಲಿ ಪ್ರಸ್ತಾಪವಿದೆಯೇ?

ಶ್ರೀ ಕೆ. ಶಿವಮೂರ್ತಿ (ವಾರ್ತಾ ಮತ್ತು ಪ್ರವಾಸೋದ್ಯಮ ರಾಜ್ಯ ಸಚಿವರು) :

ಅ) ಹೌದು

ಆ) 1991-92ನೇ ಸಾಲಿನಲ್ಲಿ ಕೇಂದ್ರ ಸರ್ಕಾರವು ಬೀದರ್‌ನಲ್ಲಿರುವ ಮಹಮದ್ ಗವಾನ್ ಮದರಸಕ್ಕೆ ಹೊನಲು ಬೆಳಕನ್ನು ಅಳವಡಿಸುವ ಯೋಜನೆಗೆ ಆದ್ಯತೆ